## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 758
ಮಾನ್ಯ ಸದಸ್ಯರ ಹೆಸರು : ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 21.02.2024
ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಆಡಳಿತ ಅಧಿಕಾರಿ (ಗ್ರಾಮ ಲೆಕ್ಕಾಧಿಕಾರಿ) ಗಳ ಸಂಖ್ಯೆಯೆಷ್ಟು; | ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಒಟ್ಟು 9839 ಗ್ರಾಮ ಆಡಳಿತ ಅಧಿಕಾರಿ (ಗ್ರಾಮ ಲೆಕ್ಕಾಧಿಕಾರಿ) ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 8015 ಗ್ರಾಮ ಆಡಳಿತ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. |
| (ಆ) | ರಾಜ್ಯದಲ್ಲಿ ಒಟ್ಟು 1,839 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳೇನು; | ಪ್ರಸ್ತುತ ರಾಜ್ಯದ ಕಂದಾಯ ಇಲಾಖೆಯಲ್ಲಿ 1824 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳು ಖಾಲಿಯಿರುತ್ತವೆ.<br><br>ಈ ಹಿಂದೆ ಗ್ರಾಮ ಆಡಳಿತ ಅಧಿಕಾರಿಗಳನ್ನು ಆಯಾ ಜಿಲ್ಲಾಧಿಕಾರಿಯವರು ಖಾಲಿ ಹುದ್ದೆಗಳಿಗನುಗುಣವಾಗಿ ಅಭ್ಯರ್ಥಿಗಳನ್ನು ದ್ವಿತೀಯ ಪಿ.ಯು.ಸಿ ಯಲ್ಲಿ ಪಡೆದ ಗರಿಷ್ಠ ಅಂಕಗಳ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುತ್ತಿದ್ದರು.<br>ಪ್ರಸ್ತುತ ವೃಂದ ಮತ್ತು ನೇಮಕಾತಿಯ ನಿಯಮಾವಳಿಗಳಲ್ಲಿ ಬದಲಾವಣೆಯಾಗಿದ್ದು, ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿ ಮಾಡಿಕೊಳ್ಳಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿರುತ್ತದೆ. |
| (ಇ) | ಇದರಿಂದ ರೈತರ ಜಮೀನಿನ ದಾಖಲೆಗಳ ಸಿದ್ಧತೆ, ಬರ, ನೆರೆ, ಚುನಾವಣೆ, ಪಡಿತರ ಚೀಟಿ ವಿತರಣೆ ಹೀಗೆ ಹಲವು ಕಾರ್ಯಕ್ರಮಗಳನ್ನು ಫಲಾನುಭವಿಗಳಿಗೆ ಸಕಾಲಕ್ಕೆ ತಲುಪುತ್ತಿಲ್ಲವೆಂಬುದನ್ನು ಸರ್ಕಾರಕ್ಕೆ ತಿಳಿದಿದೆಯೇ; | ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳಿಗೆ ಇತರೆ ಗ್ರಾಮ ಆಡಳಿತ ಅಧಿಕಾರಿಗಳನ್ನು ಅಧಿಕ ಪ್ರಭಾರದಲ್ಲಿರಿಸಿ, ರೈತರಿಗೆ ಯಾವುದೇ ತೊಂದರೆಯಾಗದಂತೆ ಕಾರ್ಯ ನಿರ್ವಹಿಸಲಾಗುತ್ತಿದೆ. |
| (ಈ) | ಗ್ರಾಮ ಲೆಕ್ಕಾಧಿಕಾರಿ ಖಾಲಿ ಹುದ್ದೆಗಳಿಗೆ ಸರ್ಕಾರ ಅಂತಿಮವಾಗಿ ಯಾವ ವರ್ಷದಲ್ಲಿ ನೇಮಕಾತಿಗಳನ್ನು ಮಾಡಿಕೊಂಡಿರುತ್ತಾರೆ; | ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳನ್ನು ಈ ಹಿಂದೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಹಂತದಲ್ಲಿ ಅಭ್ಯರ್ಥಿಗಳು ದ್ವಿತೀಯ ಪಿ.ಯು.ಸಿ ಯಲ್ಲಿ ಪಡೆದ ಗರಿಷ್ಠ ಅಂಕಗಳ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುತ್ತಿದ್ದು, ಅಂತಿಮವಾಗಿ 2022-2023 ನೇ ಸಾಲಿನಲ್ಲಿ ಕೊಡಗು, ಉತ್ತರ ಕನ್ನಡ ಹಾಗೂ ಯಾದಗಿರಿ ಜಿಲ್ಲಾಧಿಕಾರಿಗಳು ನೇಮಕಾತಿ ಮಾಡಿಕೊಂಡಿರುತ್ತಾರೆ. |

| | | |
|---|---|---|
| (ಊ) | ಗ್ರಾಮ ಲೆಕ್ಕಾಧಿಕಾರಿಗಳ ಕೊರತೆಯಿಂದ ರೈತರಿಗೆ ವಿವಿಧ ಹಂತಗಳಲ್ಲಿ ಸೇವೆ ಒದಗಿಸಲು ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರ ನೇಮಕಮಾಡಿಕೊಳ್ಳಲು ಸರ್ಕಾರದ ಕ್ರಮವೇನು? | ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳಿಗೆ ಇತರೆ ಗ್ರಾಮ ಆಡಳಿತ ಅಧಿಕಾರಿಗಳನ್ನು ಅಧಿಕ ಪ್ರಭಾರದಲ್ಲಿರಿಸಿ, ರೈತರಿಗೆ ಯಾವುದೇ ತೊಂದರೆಯಾಗದಂತೆ ಕಾರ್ಯ ನಿರ್ವಹಿಸಲಾಗುತ್ತಿದೆ.<br><br>ರಾಜ್ಯದ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇಮಕಾತಿಯನ್ನು ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದ್ದು, ಖಾಲಿ ಇರುವ ಹುದ್ದೆಗಳನ್ನು ನಿಯಮಾನುಸಾರ ಹಂತ ಹಂತವಾಗಿ ಭರ್ತಿ ಮಾಡಿಕೊಳ್ಳಲಾಗುವುದು. |

**(ಸಂಖ್ಯೆ:ಕಂಇ 33 ಬಿಎಸ್‌ಸಿ 2024)**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು